**3** ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಕಡೂರು

ಸಿ.ಸಿ.ನಂ.**24/2023**
ದಿನಾಂಕಃ **28.06.2024**

ಪಿರ್ಯಾದಿ ಃ ಶ್ರೀಮತಿ. ಸೌಜನ್ಯ .ಡಿ
ಕೋಂ ಹೆಚ್.ನರಸಿಂಹಮೂರ್ತಿ,
ಸುಮಾರು 30 ವರ್ಷ, ವ್ಯವಹಾರ,
ವಾಸಃ ರಾಜಾಜಿನಗರ, ಗಣಪತಿ ದೇವಸ್ಥಾನ ಹತ್ತಿರ,
ಬೀರೂರು ಟೌನ್, ಕಡೂರು ತಾಲ್ಲೂಕು,
ಚಿಕ್ಕಮಗಳೂರು ಜಿಲ್ಲೆ.

ವಿರುದ್ಧ

ಆರೋಪಿ ಃ ಶ್ರೀ ಶರತ್ ಪಿ.ಟಿ.
ಬಿನ್ ತಿಮ್ಮೇಗೌಡ,
ಸುಮಾರು 25 ವರ್ಷ, ವ್ಯವಸಾಯ,
ವಾಸಃ ಪುಂಡನಹಳ್ಳಿ ಗ್ರಾಮ, ಕಡೂರು ಅಂಚೆ,
ಅಮೃತಪುರ ಹೋಬಳಿ, ತರೀಕೆರೆ ತಾಲ್ಲೂಕು,
ಚಿಕ್ಕಮಗಳೂರು ಜಿಲ್ಲೆ.

ದಂಡ ಪ್ರಕ್ರಿಯಾ ಸಂಹಿತೆಯ ಕಲಂ **251** ರ ಅಡಿಯಲ್ಲಿ ಆರೋಪಣಾ ಸಾರಾಂಶಃ

ಫಿರ್ಯಾದುದಾರರು ಮತ್ತು ಆರೋಪಿಯಾದ ನೀವು ಪರಿಚಿತರಿದ್ದು, ಆರೋಪಿಯಾದ ನೀವು ನಿಮ್ಮ ತುರ್ತು ಅವಶ್ಯತೆಗೋಸ್ಕರ ಫಿರ್ಯಾದುದಾರರಿಂದ ರೂ.1,50,000/- ಹಣವನ್ನು ಸಾಲವಾಗಿ ಪಡೆದಿದ್ದು, ಸದರಿ ಹಣದ ಮರುಪಾವತಿಗಾಗಿ ನೀವು ದಿನಾಂಕ 27.09.2022 ರಂದು ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ, ಬೀರೂರು ಶಾಖೆಯ ಚೆಕ್ ಸಂಖ್ಯೆ: 004282 ಅನ್ನು ರೂ.1,50,000/- ಗಳಿಗೆ ಕೊಟ್ಟಿದ್ದು, ಅದನ್ನು ಫಿರ್ಯಾದುದಾರರು ಅವರ ಖಾತೆ ಇರುವ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಬೀರೂರು ಶಾಖೆಯ ಮೂಲಕ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ ನಿಮ್ಮ ಖಾತೆಯಲ್ಲಿ "ಸಾಕಷ್ಟು ಹಣ ಇಲ್ಲ" ಎಂಬ ಕಾರಣಕ್ಕೆ ಸದರಿ ಚೆಕ್ ಅಮಾನ್ಯಗೊಂಡು ಬ್ಯಾಂಕಿನ ಹಿಂಬರಹದೊಂದಿಗೆ ವಾಪಾಸಾಗಿದ್ದು, ಈ ಬಗ್ಗೆ

ಫಿರ್ಯಾದುದಾರರು ಅವರ ವಕೀಲರ ಮೂಲಕ ನಿಮಗೆ ದಿನಾಂಕ 17.10.2022 ರಂದು ನೋಟಿಸನ್ನು ಜಾರಿಗೊಳಿಸಿದ್ದು, ಸದರಿ ನೋಟಿಸು ನಿಮಗೆ ದಿನಾಂಕ 20.10.2022 ರಂದು ಜಾರಿಯಾಗಿದ್ದು ನೀವು ಸುಳ್ಳು ಉತ್ತರವನ್ನು ನೀಡಿ ಚೆಕ್ಕಿನ ಹಣವನ್ನು ಮರುಪಾವತಿಸಿರುವುದಿಲ್ಲ, ಆದುದರಿಂದ ನೀವು ನೆಗೋಷಿಯೇಬಲ್ ಇನ್ಸ್ಟ್ರುಮೆಂಟ್ಸ್ ಕಾಯ್ದೆಯ ಕಲಂ **138** ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿರುತ್ತೀರೆಂದು ನಿಮ್ಮ ಮೇಲೆ ಆರೋಪಣೆ ಇರುತ್ತದೆ.

ಪ್ರಶ್ನೆ-1ಃ ನಿಮಗೆ ತಿಳಿದಿರುವ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ?

ಉತ್ತರಃ

ಪ್ರಶ್ನೆ-2ಃ ನೀವು ಮೇಲಿನ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ಆಗಬೇಕೆಂದು ಬಯಸುವಿರಾ?

ಉತ್ತರಃ

ಆಪಾದನೆಯನ್ನು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥವತ್ತಾಗಿ ದಾಖಲಿಸಲಾಗಿದೆ ಎಂದು ಈ ಮೂಲಕ ದೃಢೀಕರಿಸಲಾಗಿದೆ.

(ತಾಹಾಕಲೀಲ್ ಕೆ.ಎ.)
3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಕಡೂರು.

ಆರೋಪಿ ಸಹಿಃ